# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 1206 |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 20/12/2018 |
| ಉತ್ತರಿಸಬೇಕಾದ ಸಚಿವರು | : | ಮುಖ್ಯಮಂತ್ರಿಗಳು. |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅನುದಾನಿತ ಶಾಲಾ ಕಾಲೇಜುಗಳ ಬೋಧಕ/ ಬೋಧಕೇತರ ಸಿಬ್ಬಂದಿಗಳಿಗೆ ಕಾಲ್ಪನಿಕ ವೇತನ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಈ ಸಂಬಂಧ ಶ್ರೀಯುತ ಬಸವರಾಜ ಹೊರಟ್ಟಿಯವರ ಸಮಿತಿ ವರದಿಯನ್ನು ಸರ್ಕಾರಕ್ಕೆ ನೀಡಲಾಗಿದೆಯೇ; | ಹೌದು. |
| ಇ) | ಸದರಿ ಸಮಿತಿ ವರದಿಯನ್ನು ಆಧರಿಸಿ ಸರ್ಕಾರ ಇದುವರೆಗೂ ಕೈಗೊಂಡಿರುವ ಕ್ರಮಗಳೇನು; | ಪರಿಶೀಲನೆಯಲ್ಲಿದೆ. |
| ಈ) | ಯಾವ ಕಾಲಮಿತಿಯಲ್ಲಿ ಕಾಲ್ಪನಿಕ ವೇತನ ಬಡ್ತಿಯನ್ನು ನೀಡಲಾಗುವುದು? | ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ 2014ನ್ನು ಪ್ರಶ್ನಿಸಿ ಅನುದಾನಿತ ಶಿಕ್ಷಣ ಸಂಸ್ಥೆಗಳು ಸಲ್ಲಿಸಿದ್ದ ರಿಟ್ ಅರ್ಜಿಗಳಾದ 21216/2014 ಮತ್ತು 14307/2014 ಮತ್ತು ತತ್ಸಂಬಂಧದ ಪ್ರಕರಣದಲ್ಲಿ ನ್ಯಾಯಾಲಯವು ದಿನಾಂಕ : 10/07/2015ರಂದು ತೀರ್ಪು ನೀಡಿ ಪ್ರಸ್ತಾಪಿತ ಅಧಿನಿಯಮವನ್ನು "struck down" ಮಾಡಿರುತ್ತದೆ. ಸದರಿ ರಿಟ್ ಅರ್ಜಿಗಳಲ್ಲಿ ನೀಡಿದ ತೀರ್ಪನ್ನು ಪ್ರಶ್ನಿಸಿ ಸರ್ಕಾರವು ಮಾನ್ಯ ಉಚ್ಛ ನ್ಯಾಯಾಲಯ, ಬೆಂಗಳೂರು, ಇಲ್ಲಿ ರಿಟ್ ಅಪೀಲು ಸಂಖ್ಯೆ : 2476/2015 ಮತ್ತು 2467/2015ನ್ನು ದಾಖಲಿಸಿದೆ. ಸರ್ಕಾರವು ಸಲ್ಲಿಸಿದ ಅಪೀಲಿನಲ್ಲಿ ಮಾನ್ಯ ನ್ಯಾಯಾಲಯವು ಮೇಲಿನ ರಿಟ್ ಅರ್ಜಿಗಳಲ್ಲಿ ನೀಡಿದ ತೀರ್ಪಿಗೆ ದಿನಾಂಕ : 27/11/2015ರಂದು ತೀರ್ಪಿಗೆ ತಡೆಯಾಜ್ಞೆಯನ್ನು ಪಡೆಯಲಾಗಿದೆ. ತಡೆಯಾಜ್ಞೆಯು ಪ್ರಸ್ತುತ ಜಾರಿಯಲ್ಲಿದ್ದು, ಪ್ರಕರಣವು ನ್ಯಾಯಾಲಯದಲ್ಲಿ ಬಾಕಿಯಿರುತ್ತದೆ. |

(ಹೆಚ್. ಡಿ. ಕುಮಾರಸ್ವಾಮಿ)
ಮುಖ್ಯಮಂತ್ರಿ.

ಸಂಖ್ಯೆ: ಇಡಿ 705 ಎಸ್‌ಇಎಸ್ 2018)